**Akashvani : Bangalore**
**National Bulletin In Kannada**
**02.04.2024 / 19.35 hrs**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**02.04.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ೨೦೨೪ರ ಸಾರ್ವತ್ರಿಕ ಚುನಾವಣೆ; ಕೇಂದ್ರ ಚುನಾವಣಾ ಆಯೋಗದಿಂದ ಸತ್ಯದ ಮಾಹಿತಿ ನೀಡುವ ಜಾಲತಾಣ ಬಿಡುಗಡೆ

೨. ರಾಜಕೀಯ ಪಕ್ಷಗಳಿಂದ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ - ಕರ್ನಾಟಕದಲ್ಲಿ ಇಂದು ೩೮ ನಾಮಪತ್ರ ಸಲ್ಲಿಕೆ

೩. ಅಪರಾಧ ನ್ಯಾಯ ವ್ಯವಸ್ಥೆ ಪರಿವರ್ತಿಸುವಲ್ಲಿ ತಂತ್ರಜ್ಞಾನ ಪ್ರಮುಖ ಪಾತ್ರ - ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅಭಿಪ್ರಾಯ

೪. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು - ಲಖನೌ ಸೂಪರ್ ಜಯಂಟ್ಸ್ ತಂಡಗಳ ಮುಖಾಮುಖಿ

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಯಲ್ಲಿ ಸತ್ಯದ ಮಾಹಿತಿ ನೀಡುವ ಜಾಲತಾಣಕ್ಕೆ ಕೇಂದ್ರ ಚುನಾವಣಾ ಆಯೋಗ ಇಂದು ಚಾಲನೆ ನೀಡಿತು. ದೆಹಲಿಯ ಕೇಂದ್ರ ಚುನಾವಣಾ ಆಯೋಗದ ಕಚೇರಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹಾಗೂ ಚುನಾವಣಾ ಆಯುಕ್ತರುಗಳಾದ ಜ್ಞಾನೇಶ್ ಕುಮಾರ್ ಮತ್ತು ಸುಖ್‌ಭೀರ್ ಸಿಂಗ್ ಸಂಧು ಅವರು ನೂತನ ಜಾಲತಾಣ ಅನಾವರಣ ಮಾಡಿದರು. ಸಾರ್ವಜನಿಕರಿಗೆ ನಿಖರ, ಸ್ಪಷ್ಟ ಮಾಹಿತಿ ನೀಡುವ ಜಾಲತಾಣದ ಇದಾಗಿದೆ. ಚುನಾವಣಾ ಆಯೋಗ ತನ್ನ ಜಾಲತಾಣದಲ್ಲಿ ಎಲ್ಲ ಮಾಹಿತಿಯನ್ನು ಕಾಲಾಕಾಲಕ್ಕೆ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಿದೆ ಎಂದು ಆಯೋಗ ತಿಳಿಸಿದೆ. ವಿದ್ಯುನ್ಮಾನ ಮತಯಂತ್ರ ವಿವಿ ಪ್ಯಾಟ್ ಮತದಾರರ ಸೇವೆ, ಮತಪಟ್ಟಿ, ಚುನಾವಣಾ ಮಾಹಿತಿ ಸೇರಿದಂತೆ ಎಲ್ಲ ಮಾಹಿತಿಗಳು ಮಿತ್ ವರ್ಸಸ್ ರಿಯಾಲಿಟಿ ರಿಜಸ್ಟರ್‌ನಲ್ಲಿ ಲಭ್ಯವಾಗಲಿದೆ. ಸಾರ್ವಜನಿಕರೂ ಸಹ ಚುನಾವಣಾ ವಿಚಾರಗಳ ಬಗ್ಗೆ ಮಾಹಿತಿಯನ್ನು ಜಾಲತಾಣದಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಚುನಾವಣಾ ಆಯೋಗದ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

**<><*<><>*><>**

೨೦೨೪ರ ಸಾರ್ವತ್ರಿಕ ಚುನಾವಣೆಯಲ್ಲಿ ಸತ್ಯದ ಮಾಹಿತಿ ನೀಡುವ ಜಾಲತಾಣಕ್ಕೆ ಕೇಂದ್ರ ಚುನಾವಣಾ ಆಯೋಗ ಇಂದು ಚಾಲನೆ ನೀಡಿತು. ದೆಹಲಿಯ ಕೇಂದ್ರ ಚುನಾವಣಾ ಆಯೋಗದ ಕಚೇರಿಯಲ್ಲಿ ಮುಖ್ಯ

ಚುನಾವಣಾ ಆಯುಕ್ತ ರಾಜೀವ್ ಕುಮಾರ್ ಹಾಗೂ ಚುನಾವಣಾ ಆಯುಕ್ತರುಗಳಾದ ಜ್ಞಾನೇಶ್ ಕುಮಾರ್ ಮತ್ತು ಸುಖ್‌ಭೀರ್ ಸಿಂಗ್ ಸಂಧು ಅವರು ನೂತನ ಜಾಲತಾಣ ಅನಾವರಣ ಮಾಡಿದರು. ಸಾರ್ವಜನಿಕರಿಗೆ ನಿಖರ, ಸ್ಪಷ್ಟ ಮಾಹಿತಿ ನೀಡುವ ಜಾಲತಾಣ ಇದಾಗಿದೆ. ಚುನಾವಣಾ ಆಯೋಗ ತನ್ನ ಜಾಲತಾಣದಲ್ಲಿ ಎಲ್ಲ ಮಾಹಿತಿಯನ್ನು ಕಾಲಾಕಾಲಕ್ಕೆ ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಲಿದೆ ಎಂದು ಆಯೋಗ ತಿಳಿಸಿದೆ. ವಿದ್ಯುನ್ಮಾನ ಮತಯಂತ್ರ ವಿವಿ ಪ್ಯಾಟ್ ಮತದಾರರ ಸೇವೆ, ಮತಪಟ್ಟಿ, ಚುನಾವಣಾ ಮಾಹಿತಿ ಸೇರಿದಂತೆ ಎಲ್ಲ ಮಾಹಿತಿಗಳು ಮಿತ್ ವರ್ಸಸ್ ರಿಯಾಲಿಟಿ ರಿಜಸ್ಟರ್‌ನಲ್ಲಿ ಲಭ್ಯವಾಗಲಿದೆ. ಸಾರ್ವಜನಿಕರೂ ಸಹ ಚುನಾವಣಾ ವಿಚಾರಗಳ ಬಗ್ಗೆ ಮಾಹಿತಿಯನ್ನು ಜಾಲತಾಣದಲ್ಲಿ ಪಡೆದುಕೊಳ್ಳಬಹುದಾಗಿದೆ ಎಂದು ಚುನಾವಣಾ ಆಯೋಗದ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

<><*<><>*><>

೧೮ನೇ ಲೋಕಸಭಾ ಚುನಾವಣೆಯಲ್ಲಿ ರಾಜಕೀಯ ಪಕ್ಷಗಳ ಮುಖಂಡರ ಪ್ರಚಾರ ಕಾರ್ಯ ಚುರುಕುಗೊಂಡಿದೆ. ಒಂದು ಹಾಗೂ ಎರಡನೇ ಹಂತದ ನಾಮಪತ್ರ ಸಲ್ಲಿಕೆ ಪ್ರಕ್ರಿಯೆ ಬಿರುಕುಗೊಂಡಿದೆ. ರಾಜಕೀಯ ಪಕ್ಷಗಳಾದ ಬಿಜೆಪಿ, ಕಾಂಗ್ರೆಸ್, ಬಿಎಸ್‌ಪಿ, ಸಮಾಜವಾದಿ, ಆಮ್‌ಆದ್ಮಿ ಸೇರಿದಂತೆ ರಾಷ್ಟ್ರೀಯ ಮತ್ತು ಪ್ರಾದೇಶಿಕ ಪಕ್ಷಗಳು ಅಭ್ಯರ್ಥಿಗಳನ್ನು ಕಣಕ್ಕಿಳಿಸಿರುವುದಾಗಿ ಪ್ರಕಟಿಸಿದೆ. ರಾಜಕೀಯ ಪಕ್ಷಗಳ ನಾಯಕರು ತಮ್ಮ ತಮ್ಮ ಅಭ್ಯರ್ಥಿಗಳ ಪರವಾಗಿ ಬಿರುಸಿನ ಪ್ರಚಾರ ಕೈಗೊಂಡಿದ್ದಾರೆ ಎಂದು ವರದಿಯಾಗಿದೆ.  ಬಿಜೆಪಿ ಹಿರಿಯ ನಾಯಕ, ಪ್ರಧಾನಿ ನರೇಂದ್ರ ಮೋದಿ ಅವರು, ಉತ್ತರಾಖಂಡದ ರುದ್ರಪುರದ ಉದಯ್‌ಸಿಂಗ್ ನಗರದಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಮತಯಾಚಿಸಿದರು. ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ ಮಾಡಿರುವ ಸಾಧನೆಯನ್ನು ಜನತೆ ಮುಂದಿಟ್ಟರು.  ಕಾಂಗ್ರೆಸ್ ಪಕ್ಷದ ಮುಖಂಡರೂ ಸಹ ದೇಶದ ಹಲವೆಡೆ ತಮ್ಮ ಅಭ್ಯರ್ಥಿಗಳ ಪರವಾಗಿ ಮತಯಾಚಿಸಿದರು ಎಂದು ವರದಿಯಾಗಿದೆ.  ಆಮ್‌ಆದ್ಮಿ ಪಕ್ಷದ ಮುಖಂಡರೂ ಸಹ ಪ್ರಚಾರ ನಡೆಸಿದರು ಎಂದು ಪಕ್ಷದ ಮೂಲಗಳು ತಿಳಿಸಿವೆ. ಒಡಿಶಾದ ಭುವನೇಶ್ವರದಲ್ಲಿ ಬಿಜೆಡಿ ೧೦೨ ಸದಸ್ಯರ ವಿಧಾನಸಭಾ ಕ್ಷೇತ್ರದ ಹೆಸರುಗಳನ್ನು ಅಧಿಕೃತವಾಗಿ ಪ್ರಕಟಿಸಿದೆ. ಇದರ ಜೊತೆಗೆ ಸಂಸತ್‌ನ ಕೆಲವು ಆಕಾಂಕ್ಷಿಗಳ ಹೆಸರಗಳನ್ನೂ ಸಹ ಬಿತ್ತರಿಸಿದೆ ಎಂದು ವರದಿಯಾಗಿದೆ.

<><*<><>*><>

ಕರ್ನಾಟಕ ರಾಜ್ಯದ ಯಾವುದೇ ಭಾಗದಲ್ಲಿ ಕುಡಿಯುವ ನೀರಿಗೆ ಸಮಸ್ಯೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆರಿಗೆ ಹಣದಲ್ಲಿ ರಾಜ್ಯಕ್ಕೆ ನ್ಯಾಯಯುತವಾಗಿ ಸಲ್ಲಬೇಕಾಗಿರುವ ಪಾಲಿನ ಹಣವನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ ಎಂದು ಮುಖ್ಯಮಂತ್ರಿ ಅಸಮಾಧಾನ ಹೊರ ಹಾಕಿದರು. ನಂತರ ಅವರು, ಪಕ್ಷದ ಅಭ್ಯರ್ಥಿಯ ಪರವಾಗಿ ರೋಡ್ ಶೋ ಮೂಲಕ ಮತಯಾಚಿಸಿದರು. ಬಿಜೆಪಿ ಹಿರಿಯ ಮುಖಂಡ ಅಮಿತ್ ಶಾ ಬೆಂಗಳೂರಿನಲ್ಲಿಂದು ಏರ್ಪಡಿಸಿದ್ದ ಬಿಜೆಪಿ ಸಮಾವೇಶವನ್ನು ಉದ್ದೇಶಿಸಿ ಮಾತನಾಡಿ, ಅಭಿವೃದ್ಧಿ ವಿಚಾರದಲ್ಲಿ ಯಾವುದೇ ರಾಜ್ಯಗಳಿಗೆ ತಾರತಮ್ಯ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.  ಯುಪಿಎ ಅವಧಿಯಲ್ಲಿ ರಾಜ್ಯಕ್ಕೆ ೧೦ ವರ್ಷದಲ್ಲಿ ಒಂದು ಲಕ್ಷ ೪೨ ಸಾವಿರ ಕೋಟಿ ನೀಡಿದ್ದರೆ, ಎನ್‌ಡಿಎ ಅವಧಿಯ ೧೦ ವರ್ಷದಲ್ಲಿ ೪ ಲಕ್ಷ ೯೧ ಸಾವಿರ ಕೋಟಿ ನೀಡಲಾಗಿದೆ. ಬಿಜೆಪಿ ಅಭಿವೃದ್ಧಿ ವಿಚಾರದಲ್ಲಿ ಮತಯಾಚನೆ ಮಾಡಲಿದೆ ಎಂದು

ಅಮಿತ್ ಶಾ ಪುನರುಚ್ಚರಿಸಿದರು. ಸಮಾವೇಶದಲ್ಲಿ ಪಕ್ಷದ ನಾಯಕರಾದ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ, ಶೋಭಾ ಕರಂದ್ಲಾಜೆ, ಪ್ರಲ್ಹಾದ್ ಜೋಶಿ, ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ, ಚುನಾವಣಾ ಅಭ್ಯರ್ಥಿಗಳಾದ ಪಿ.ಸಿ. ಮೋಹನ್, ಸಿ.ಎನ್. ಮಂಜುನಾಥ್, ತೇಜಸ್ವಿ ಸೂರ್ಯ, ಡಾ. ಕೆ. ಸುಧಾಕರ್ ಮೊದಲಾದವರು ಹಾಜರಿದ್ದರು.

<><*<><>*><>

ಇದೇ ೨೬ರಂದು ನಡೆಯಲಿರುವ ಲೋಕಸಭಾ ಚುನಾವಣೆಗೆ ಇಂದು ಒಟ್ಟು ೩೮ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿ ಕಚೇರಿ ಪ್ರಕಟಣೆ ತಿಳಿಸಿದೆ. ಇದರಲ್ಲಿ ೩೩ ಪುರುಷರು, ೫ ಮಹಿಳೆಯರು ಸೇರಿದ್ದಾರೆ. ಈವರೆಗೆ ೧೫೨ ನಾಮಪತ್ರ ಸಲ್ಲಿಕೆಯಾಗಿದೆ. ಸಿ-ವಿಜಿಲ್ ಆಪ್ ಮೂಲಕ ೧೩ ಸಾವಿರದ ೩೪೬  ದೂರುಗಳನ್ನು ಸ್ವೀಕರಿಸಲಾಗಿದೆ ಎಂದು ಕಚೇರಿ ಮೂಲಗಳು ತಿಳಿಸಿವೆ.

<><*<><>*><>

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಕ್ಷದ ಪ್ರಣಾಳಿಕಾ ಸಮಿತಿ ಸಭೆ ಪಕ್ಷದ ಕಚೇರಿಯಲ್ಲಿಂದು ನಡೆಯಿತು. ಹಿರಿಯ ಮುಖಂಡ ರಾಜನಾಥ್ ಸಿಂಗ್ ನೇತೃತ್ವದಲ್ಲಿ ೨೭ ಸದಸ್ಯರು ಸಭೆ ಸೇರಿ, ಜನತೆಗೆ ನೀಡಬಹುದಾದ ಭರವಸೆಗಳ ಬಗ್ಗೆ ಚರ್ಚೆ ನಡೆಸಿದರು ಎಂದು ವರದಿಯಾಗಿದೆ.  ಈ ಮಧ್ಯೆ ಕಾಂಗ್ರೆಸ್ ಪಕ್ಷವೂ ಸಹ ತನ್ನ ಪ್ರಣಾಳಿಕಾ ಸಮಿತಿ ಸಭೆ ಸೇರಿ, ಚರ್ಚೆ ನಡೆಸಿತು. ಅಲ್ಲದೇ, ಕಾಂಗ್ರೆಸ್ ಚುನಾವಣಾ ಸಮಿತಿ ಇನ್ನು ಕೆಲವು ಹೆಸರುಗಳನ್ನು ಅಖೈರಗೊಳಿಸಿತು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

ಅಪರಾಧ ನ್ಯಾಯ ವ್ಯವಸ್ಥೆಯನ್ನು ಪರಿವರ್ತಿಸುವಲ್ಲಿ ತಂತ್ರಜ್ಞಾನ ಪ್ರಮುಖ ಪಾತ್ರ ವಹಿಸಲಿದೆ ಎಂದು ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ, ನ್ಯಾಯಧೀಶ ಡಿ.ವೈ.ಚಂದ್ರಚೂಡ್ ಅಭಿಪ್ರಾಯಪಟ್ಟಿದ್ದಾರೆ.  ದೆಹಲಿಯಲ್ಲಿ ಆಯೋಜಿಸಿದ್ದ ೨೦ನೇ ಡಿ.ಪಿ.ಕೋಹ್ಲಿ ಸ್ಮಾರಕ ಉಪನ್ಯಾಸದಲ್ಲಿ ಪ್ರಧಾನ ಭಾಷಣ ಮಾಡಿದ ಅವರು, ಹೊಸ ಯುಗದ ಅಪರಾಧ ಜಾಲಗಳನ್ನು ಪರಿಣಾಮಕಾರಿಯಾಗಿ ನಿಭಾಯಿಸಲು, ನೂತನ ತಂತ್ರಜ್ಞಾನ ಅಳವಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು. ತಂತ್ರಜ್ಞಾನದ ಪಾತ್ರ ತ್ವರಿತ ಹಾಗೂ ನ್ಯಾಯಯುತ ವಿಚಾರಣೆಗೆ ಅನುಕೂಲವಾಗಲಿವೆ. ಡಿಜಿಟಲ್ ತಂತ್ರಜ್ಞಾನ ಯುಗದಲ್ಲಿ ಕಾನೂನು ಮತ್ತು ತಂತ್ರಜ್ಞಾನವು ಅಪರಾಧ ಪತ್ತೆಗೆ ಸಹಕಾರಿಯಾಗಲಿವೆ. ಆ ನಿಟ್ಟಿನಲ್ಲಿ ನೂತನ ತಂತ್ರಜ್ಞಾನವನ್ನು ಬಳಕೆ ಮಾಡಿಕೊಂಡು ಅಪರಾಧ ಜಾಲಗಳನ್ನು ಪತ್ತೆ ಮಾಡಿ ತಪ್ಪಿತಸ್ಥರಿಗೆ ಶಿಕ್ಷೆ ಸಕಾಲಕ್ಕೆ ದೊರೆಯುವ ಮೂಲಕ ನ್ಯಾಯಾಂಗ ವ್ಯವಸ್ಥೆಯಲ್ಲಿ ಸಾರ್ವಜನಿಕರಿಗೆ ನಂಬಿಕೆ ಹಾಗೂ ವಿಶ್ವಾಸಾರ್ಹತೆ ಹೆಚ್ಚಿಸಬೇಕು ಎಂದು ಸೂಚನೆ ನೀಡಿದರು. ಇದೇ ಸಂದರ್ಭದಲ್ಲಿ ರಾಷ್ಟ್ರಪತಿ ಪದಕಗಳನ್ನು ಅವರು, ಪ್ರದಾನ ಮಾಡಿದರು.

<><*<><>*><>

೧೯೯೦ ರ ನಂತರ ದೇಶದಲ್ಲಿ ನೂತನ ತಂತ್ರಜ್ಞಾನದ ಮೂಲಕ ಮತದಾನದ ವ್ಯವಸ್ಥೆ ಜಾರಿ ಮಾಡಿದ ನಂತರ ಅಪಾರ ಪ್ರಮಾಣದ ಕಾಗದ ಬಳಕೆಯನ್ನು ನಿಯಂತ್ರಿಸಲು ಸಾಧ್ಯವಾಯಿತು. ಇದನ್ನು ತಡೆಯಲು ಚುನಾವಣಾ ಆಯೋಗ ತೆಗೆದುಕೊಂಡ ಹಲವಾರು ಮಹತ್ವದ ನಿರ್ಧಾರದಿಂದ ಕ್ರಾಂತಿಕಾರಿ ಬದಲಾವಣೆಯಾಯಿತು ಎಂದು ಆಯೋಗದ ಮೂಲಗಳನ್ನು ಉಲ್ಲೇಖಿಸಿ ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ವಿದ್ಯುನ್ಮಾನ ಮತಯಂತ್ರ ಮತ್ತು ವಿವಿ ಪ್ಯಾಟ್‌ಗಳ ಬಳಕೆಯಿಂದ ತ್ವರಿತವಾಗಿ ಹಾಗೂ ನಿಖರವಾಗಿ ಫಲಿತಾಂಶ ಸಕಾಲಕ್ಕೆ ಯಾವುದೇ ತೊಂದರೆ ಇಲ್ಲದೇ ಪ್ರಕಟಿಸುವ ವ್ಯವಸ್ಥೆಯನ್ನು ಚುನಾವಣಾ ಆಯೋಗ ಜಾರಿ ಮಾಡಿದ ನಂತರ ದಕ್ಷತೆ ಪ್ರಮಾಣ ಖಚಿತವನ್ನು ಆಯೋಗ ಪ್ರಕಟಿಸಿತ್ತು. ವಿದ್ಯುನ್ಮಾನ ಮತಯಂತ್ರಗಳು ಹಾಗೂ ವಿವಿ ಪ್ಯಾಟ್‌ಗಳು, ಭಾರತೀಯ ಚುನಾವಣಾ ಪ್ರಕ್ರಿಯೆ ಕ್ರಾಂತಿಕಾರಿ ಬದಲಾವಣೆಗೆ ಸಾಕ್ಷಿಯಾಯಿತು ಎಂದು ಆಯೋಗ ತಿಳಿಸಿದೆ. ಜನಸಾಮಾನ್ಯರು ಚಲಾಯಿಸಿದ ಮತಗಳನ್ನು ಸುರಕ್ಷಿತವಾಗಿ ಸಂಗ್ರಹಿಸುವ ಮೂಲಕ, ಪ್ರತಿಯೊಬ್ಬ ವ್ಯಕ್ತಿಗೆ ಒಂದು ಮತವನ್ನು ಖಾತರಿಪಡಿಸುವುದರ ಜೊತೆಗೆ ಅದರ ನೈಜತೆಯನ್ನು ರಕ್ಷಿಸುವುದು ವಿದ್ಯುನ್ಮಾನ ಮತಯಂತ್ರದ ಕ್ರಾಂತಿಕಾರಿ ಸಾಧನೆ ಆಯಿತು ಎಂದು ನಮ್ಮ ಬಾತ್ಮೀದಾರರು ವರದಿ ಮಾಡಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಚುನಾವಣೆ ಪ್ರಕ್ರಿಯೆಯು ವಿಶ್ವಾಸಾರ್ಹತೆಗಿಂತ ಮುಖ್ಯವಾದುದ್ದು ಯಾವುದೂ ಇಲ್ಲ. ಹಾಗಾಗಿ ಮುಕ್ತ, ನ್ಯಾಯಸಮ್ಮತವಾಗಿ ಚುನಾವಣೆ ನಡೆಯಬೇಕು. ಪಾರದರ್ಶಕ ಸುಧಾರಣೆಗಳನ್ನು ತರುವ ಮೂಲಕ ಚುನಾವಣಾ ಆಯೋಗವು ಪ್ರಜಾಪ್ರಭುತ್ವದ ಆಯಾಮಗಳಲ್ಲಿ ನ್ಯಾಯಯುತ, ದಕ್ಷತೆ ಹಾಗೂ ನಾಗರಿಕರ ಸಂಪೂರ್ಣ ನಂಬಿಕೆಯನ್ನು ಪಡೆದುಕೊಂಡಿದೆ ಎಂದು ಆಕಾಶವಾಣಿಯ ಹಿರಿಯ ಬಾತ್ಮೀದಾರರು ವರದಿ ಮಾಡಿದ್ದಾರೆ.

<><*<><>*><>

೧೮ನೇ ಮುಂಬೈ 'ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ' ಬರುವ ಜೂನ್ ೧೬ ರಿಂದ ೧೮ರವರೆಗೆ ನಡೆಸಲು ಉದ್ದೇಶಿಸಲಾಗಿದೆ ಎಂದು ರಾಷ್ಟ್ರೀಯ ಚಲನಚಿತ್ರಗಳ ಅಭಿವೃದ್ಧಿ ನಿಗಮದ ಜಂಟಿ ಕಾರ್ಯದರ್ಶಿ ಪ್ರಿತುಲ್ ಕುಮಾರ್ ಮುಂಬೈನಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದರು. ಚಲನಚಿತ್ರಗಳ ಮಾಹಿತಿಯನ್ನು ಸಂಘಟನಾಕಾರರಿಗೆ ಕಳುಹಿಸಲು ಇದೇ ೧೦ ರಂದು ಕೊನೆಯ ದಿನವಾಗಿರುತ್ತದೆ. ಪ್ರಪ್ರಥಮ ಬಾರಿಗೆ ಡಾಕ್ ಫಿಲ್ಮ್ ಬಜಾರ್ ಮೂಲಕ ಈ ಚಿತ್ರೋತ್ಸವವನ್ನು ರಾಷ್ಟ್ರೀಯ ಚಲನಚಿತ್ರ ಅಭಿವೃದ್ಧಿ ಮಂಡಳಿ ಹಮ್ಮಿಕೊಂಡಿದೆ ಎಂದು ಅವರು ತಿಳಿಸಿದೆ. ಪ್ರಾದೇಶಿಕ, ರಾಷ್ಟ್ರೀಯ ಸೇರಿದಂತೆ ವಿವಿಧ ಬಗೆಯ ಚಲನಚಿತ್ರಗಳ ವಿವರಗಳನ್ನು ನಿರ್ಮಾಪಕರು ಸಂಘಟನಾಕಾರರಿಗೆ ಮಾಹಿತಿ ನೀಡುವಂತೆ ಜಂಟಿ ಕಾರ್ಯದರ್ಶಿ ಪ್ರಿತುಲ್ ಕುಮಾರ್ ಮನವಿ ಮಾಡಿದರು.

<><*<><>*><>

ಪಶ್ಚಿಮ ಹಿಮಾಲಯದ ವಲಯದಲ್ಲಿ ಮುಂದಿನ ಒಂದು ವಾರಗಳ ಕಾಲ ಹಗುರದಿಂದ ಸಾಧಾರಣಾ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ವರದಿ ಮಾಡಿದೆ. ನೈರುತ್ಯ ಮುಂಗಾರು ಈ ಭಾಗದಲ್ಲಿ ಏಪ್ರಿಲ್ ೫ ರಿಂದ ಆರಂಭವಾಗುವ ನಿರೀಕ್ಷೆಯಿದೆ. ಜಮ್ಮು-ಕಾಶ್ಮೀರ, ಲಡಾಖ್, ಹಿಮಾಚಲ ಪ್ರದೇಶ ಸೇರಿದಂತೆ ಹಿಮಾಲಯದ ಪರ್ವತ ಶ್ರೇಣಿಯಲ್ಲಿ ಇದೇ ೪ ರಿಂದ ಮೂರುದಿನಗಳ ಕಾಲ ಮಳೆಯಾಗುವ ಸಾಧ್ಯತೆಯಿದೆ.

<><*<><>*><>

ಭಾರತೀಯ ವಾಯುಪಡೆಯು ಪೋಕ್ರಾನ್‌ನಲ್ಲಿ ಅತಿ ದೊಡ್ಡ ವಾಯುಪಡೆಯ ಶಕ್ತಿ ಪ್ರದರ್ಶನ ನಡೆಸಿತು. ನಿನ್ನೆಯಿಂದ ಆರಂಭಗೊಂಡ 'ಗಗನ ಶಕ್ತಿ' ವ್ಯಾಯಾಮದಲ್ಲಿ ಆಧುನಿಕ ಯುದ್ಧ ವಿಮಾನಗಳು, ಆಧುನಿಕ ಹೆಲಿಕಾಪ್ಟರ್‌ಗಳು ತಮ್ಮ ಸಾಮರ್ಥ್ಯವನ್ನು ಪ್ರದರ್ಶಿಸಿದವು. ಈ ಪ್ರದರ್ಶನ ಇದೇ ೧೦ರವರೆಗೆ ಮುಂದುವರಿಯಲಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ.

**<><*<><>*><>**

ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯುತ್ತಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಲಖನೌ ಸೂಪರ್ ಜಯಂಟ್ಸ್ ತಂಡಗಳು ಮುಖಾಮುಖಿಯಾಗಿವೆ. ಮೂರು ಪಂದ್ಯಗಳನ್ನಾಡಿರುವ ಆರ್‌ಸಿಬಿ, ೧ ಪಂದ್ಯದಲ್ಲಿ ಗೆದ್ದು, ಎರಡರಲ್ಲಿ ಸೋತಿದೆ. ಲಖನೌ ಜಯಂಟ್ಸ್ ತಂಡ ಆಡಿರುವ ಎರಡು ಪಂದ್ಯಗಳಲ್ಲಿ ಗೆಲುವು- ಸೋಲಿನ ಮಿಶ್ರ ಫಲ ಅನುಭವಿಸಿದೆ. ಟಾಸ್ ಗೆದ್ದ ಆರ್‌ಸಿಬಿ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಿಗ್ಗೆ ೭.೦೫ ಕ್ಕೆ <>*><>**